1580ನೇ ಮುಬು SL NO: 59 ದಿ: 16 03 26

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್ ಎಲ್ ಭೋಜೇಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ:**

ರಾಜ್ಯದಲ್ಲಿರುವ ಸುಮಾರು 6000ಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರು 10, 15, 20 ವರ್ಷಗಳಿಂದಲೂ ಕಾರ್ಯ ನಿರ್ವಹಿಸಿ ಉತ್ತಮ ಅನುಭವ ಹೊಂದಿದ್ದರು ಇಂದು ಅವರು ಮತ್ತು ಅವರ ಕುಟುಂಬಗಳು ಬೀದಿಗೆ ಬರುವ ಪರಿಸ್ಥಿತಿ ಎದುರಾಗಿದೆ ಇದು ನಿಜಕ್ಕೂ ವಿಷಾದನೀಯ ಸಂಗತಿಯಾಗಿದೆ ಎಂದು ದಿನಾಂಕ.16.03.2026ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಯಾಗಿದ್ದು, ಸದರಿ ಶಿಕ್ಷಕರುಗಳು ಇಲ್ಲಿಯವರೆಗೂ ಕಡಿಮೆ ವೇತನದಲ್ಲಿಯೇ ಸೇವೆ ಸಲ್ಲಿಸಿ ಪ್ರಸ್ತುತ ಯು.ಜಿ.ಸಿ ಮಾನದಂಡಗಳ ಹಿನ್ನಲೆಯಲ್ಲಿ ಕೆಲಸವಿಲ್ಲದೆ ಕೈಯಲ್ಲಿ ಹಣವೂ ಇಲ್ಲದೆ ಜೀವನ ನಿರ್ವಹಣೆ ಮಾಡುವುದು ತುಂಬಾ ತುಂಬಾ ಕಷ್ಟಸಾಧ್ಯವಾಗಿದ್ದು. ಇನ್ನು ಮುಂದಾದರೂ ಸರ್ಕಾರದಿಂದ ಏನಾದರೂ ಸಹಾಯ ಸಿಗುವ ಆಶಾವಾದದಲ್ಲಿ ದಿನ ಕಳೆಯುತ್ತಿದ್ದಾರೆ.

ರಾಜ್ಯದ ಸುಮಾರು 430 ಪದವಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಹಿಂದಿನ ಸರ್ಕಾರದ ಅವಧಿಯಲ್ಲಿ ನೆಟ್, ಸೆಟ್, ಪಿ.ಹೆಚ್.ಡಿ ಅಂತಹ ಮುಖ್ಯ ಪರೀಕ್ಷೆಗಳನ್ನು ಮಾಡಿಕೊಂಡು ಹೆಚ್ಚಿನ ವಿದ್ಯೆಯನ್ನು ಪಡೆಯುವಂತೆ ಆದೇಶ ಮಾಡಿದ್ದು, ಸದರಿ ಸಮಯದಲ್ಲಿ ಹಳೆಯ ಪಠ್ಯಕ್ರಮದಲ್ಲಿ ಅಧ್ಯಯನ ಮಾಡಿದ ಶಿಕ್ಷಕರಿಗೆ ಈಗಿನ ಪಠ್ಯಕ್ರಮಕ್ಕೆ ಹೊಂದಾಣಿಕೆ ಆಗದ ಕಾರಣ ಹೆಚ್ಚಿನ ಅಭ್ಯಾಸದಿಂದ ವಂಚಿತರಾಗಿ ಇಂದು ಯು.ಜಿ.ಸಿ ಮಾನದಂಡದ ಆದೇಶದಂತೆ ಕೆಲಸದಿಂದ ತೆಗೆಲಾಯಿತು. ಇದರಲ್ಲಿ ಕೆಲವರು ಕಾನೂನು ಹೋರಾಟ ಮಾಡಿ ಯು.ಜಿ.ಸಿ ಅರ್ಹತೆ ಪಡೆದ ಸುಮಾರು 2000 ಅತಿಥಿ ಉಪನ್ಯಾಸಕರನ್ನು ಮರಳಿ ತೆಗೆದುಕೊಂಡು ಉಳಿದ ಶಿಕ್ಷಕರನ್ನು ಕೈಬಿಡಲಾಯಿತು. ಇದರಿಂದ ಅವರ ಪರಿಸ್ಥಿತಿ ಅಂತತ್ರವಾಗಿ ಅವರ ಕುಟುಂಬ ನಿರ್ವಹಣೆ, ಆರೋಗ್ಯ, ಮಕ್ಕಳ ವಿದ್ಯಾಭ್ಯಾಸ ಇವುಗಳ ಮೇಲೆ ದುಷ್ಪರಿಣಾಮ ಉಂಟಾಗಿದೆ. ಇದರ ಬಗ್ಗೆ ಅತಿಥಿ ಉಪನ್ಯಾಸಕರುಗಳು ಹೋರಾಟ ಮಾಡಿ ಹಲವು ಬಾರಿ ಮಾನ್ಯ ಮುಖ್ಯ ಮಂತ್ರಿಗಳು, ಉಪಮುಖ್ಯ ಮಂತ್ರಿಗಳು, ಉನ್ನತ ಶಿಕ್ಷಣ ಸಚಿವರು ಸೇರಿದಂತೆ ಹಲವು ಸಚಿವರನ್ನು ಭೇಟಿ ಮಾಡಿದರೂ ಇಲ್ಲಿಯವರೆಗೂ ಯಾವುದೇ ಪ್ರಯೋಜನವಾಗಿರುವುದಿಲ್ಲ.

ಕಾರಣ ಸದರಿ ಅಂಶಗಳ ಸದರಿ ಅತಿಥಿ ಉಪನ್ಯಾಸಕರುಗಳಿಗೆ ಸರ್ಕಾರವು ಬೇರೆ ವ್ಯವಸ್ಥೆ ಮಾಡಲಿ ಎಂಬುದರ ಕುರಿತು.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ10 ಗಂಟೆಗಳ ಬದಲಾಗಿ, ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 15 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಹೆಚ್ಚಿಸಲಾಗಿದೆ. ಸದರಿ ಆದೇಶದಲ್ಲಿ "ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಧಿ ನೀಡುವುದು, 3 ವರ್ಷಗಳ ನಂತರ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ

ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ. ಅದರನ್ವಯ ಯು.ಜಿ.ಸಿ. ಅರ್ಹತೆ ಪಡೆಯದ ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ವಿದ್ಯಾರ್ಹತೆಯನ್ನು ಪಡೆಯಲು ದಿನಾಂಕ:14.01.2022 ರಿಂದ ದಿನಾಂಕ:13.01.2025ರವರೆಗೆ 03 ವರ್ಷಗಳ ಕಾಲಾವಕಾಶವನ್ನು ನೀಡಲಾಗಿತ್ತು.

ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿ ಸಂಖ್ಯೆ:23600/2023ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ (ಎನ್‌ಇಟಿ/ಎಸ್‌ಎಲ್‌ಇಟಿ/ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ ಆದೇಶಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ:05.09.2024ರ ತೀರ್ಪಿನ ಸಂಬಂಧ ಇಲಾಖಾ ವತಿಯಿಂದ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:1578/2024ನ್ನು ದಾಖಲಿಸಲಾಗಿತ್ತು. ಸದರಿ ರಿಟ್ ಅಪೀಲು ಸಂಖ್ಯೆ:1578/2024ನ್ನು ಮಾನ್ಯ ವಿಭಾಗಿಯ ಪೀಠವು (Chief Justice Bench) ದಿನಾಂಕ:08.10.2025ರಂದು ವಿಚಾರಣೆಗೆ ತೆಗೆದುಕೊಂಡಿದ್ದು, ಸದರಿ ದಿನಾಂಕದಂದು ರಾಜ್ಯದ ರಿಟ್ ಅಪೀಲನ್ನು ವಜಾಗೊಳಿಸಿ, ನೀಡಿರುವ ಅಂತಿಮ ತೀರ್ಪಿನಲ್ಲಿ ರಿಟ್ ಅರ್ಜಿ ಸಂಖ್ಯೆ:23600/2023ರಲ್ಲಿ ದಿನಾಂಕ:05.09.2024ರಂದು ನೀಡಿರುವ ತೀರ್ಪನ್ನು ಎತ್ತಿ ಹಿಡಿದು, 2025-26ನೇ ಸಾಲಿನಿಂದ ಯು.ಜಿ.ಸಿ. ನಿಯಮಗಳನ್ವಯ ನೇಮಕ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿರುತ್ತದೆ.

ರಿಟ್ ಅಪೀಲು ಸಂಖ್ಯೆ:1578/2024ರಲ್ಲಿ ದಿನಾಂಕ:08.10.2025ರಂದು ನೀಡಿರುವ ತೀರ್ಪಿನ ಕುರಿತು ಕಾನೂನು ಅಭಿಪ್ರಾಯ ಪಡೆಯಲಾಗಿದ್ದು, ನೀಡಿರುವ ಅಭಿಪ್ರಾಯದನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ.ಯನ್ನು ದಾಖಲಿಸಲು ಸರ್ಕಾರವು ಆದೇಶ ಸಂಖ್ಯೆ:ಇಡಿ 425 ಡಿಸಿಇ 2025, ದಿನಾಂಕ:29.11.2025ರಲ್ಲಿ ಕಾರ್ಯಕಾರಿ ಆದೇಶವನ್ನು ಹೊರಡಿಸಿದೆ.

ಮುಂದುವರೆದು, ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:1578/2024ಕ್ಕೆ ದಿನಾಂಕ:20.02.2026 ರಂದು ನೀಡಿರುವ ನಿರ್ದೇಶನದಂತೆ, ಕೆಲವು ವಿಷಯಗಳಲ್ಲಿ ಯು.ಜಿ.ಸಿ. ನಿಗದಿತ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಾಗದ ಪ್ರಯುಕ್ತ ಯು.ಜಿ.ಸಿ. ನಿಗದಿತ ವಿದ್ಯಾರ್ಹತೆ ಹೊಂದಿರದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಮಾನ್ಯ ನ್ಯಾಯಾಲಯದ ಗಮನಕ್ಕೆ ತರಲಾಗಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:20.02.2026 ರಂದು ನೀಡಿರುವ ನಿರ್ದೇಶನದಲ್ಲಿ ಕೆಲವು ವಿಷಯಗಳಲ್ಲಿ ಯು.ಜಿ.ಸಿ. ನಿಗದಿತ ವಿದ್ಯಾರ್ಹತೆ ಹೊಂದಿರದ ಅಭ್ಯರ್ಥಿಗಳನ್ನು 2025-26ನೇ ಸಾಲಿನ ಪ್ರಸ್ತುತ ಚಾಲ್ತಿಯಲ್ಲಿರುವ ಸೆಮಿಸ್ಟರ್ ಪೂರ್ಣಗೊಳ್ಳುವವರೆಗೆ ಮಾತ್ರ ಕರ್ತವ್ಯ ನಿರ್ವಹಿಸಲು ಅವಕಾಶ ಕಲ್ಪಿಸಿದೆ. ಅದರಂತೆ, ಕೆಲವು ವಿಷಯಗಳಲ್ಲಿ ಯು.ಜಿ.ಸಿ. ನಿಗದಿತ ವಿದ್ಯಾರ್ಹತೆ ಹೊಂದಿರದ ಅಭ್ಯರ್ಥಿಗಳನ್ನು 2025-26ನೇ ಸಾಲಿನ ಪ್ರಸ್ತುತ ಚಾಲ್ತಿಯಲ್ಲಿರುವ ಸೆಮಿಸ್ಟರ್ ಪೂರ್ಣಗೊಳ್ಳುವವರೆಗೆ ಮಾತ್ರ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ಸಂಖ್ಯೆ: ಇಡಿ 114 ಡಿಸಿಇ 2026(ಇ)**

**(ಡಾ: ಎಂ.ಸಿ ಸುಧಾಕರ್)**
ಉನ್ನತ ಶಿಕ್ಷಣ ಸಚಿವರು